**2ನೇ ಹೆಚ್ಚುವರಿ ಸಿವಿಲ್ ದಂಡಾಧಿಕಾರಿಯವರ ನ್ಯಾಯಾಲಯ ಚನ್ನಗಿರಿ**

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆ: 18/2023**

| **ಪಿರ್ಯಾದುದಾರರು :** | **ವಿರುದ್ಧ** | **ಆರೋಪಿತರು:** |
|---|---|---|
| ಸಂತೇಬೆನ್ನೂರು ಪೊಲೀಸ್ ಠಾಣೆ | | ಆಃ1 ಹರೀಶ ಕೆ ಬಿ ಬಿನ್ ಬಸವರಾಜಪ್ಪ<br>ವಯಸ್ಸುಃ 36 ವರ್ಷ,<br>ವಾಸ: ಕಾಕನೂರು ಗ್ರಾಮ, ಚನ್ನಗಿರಿ ತಾಃ ದಾವಣಗೆರೆ ಜಿಲ್ಲೆ<br>ಆಃ2 ತಿಮ್ಮಣ್ಣ ಬಿನ್ ಪರಸಪ್ಪ (SPLIT UP)<br>ಆಃ3 ಬೈರೇಶಿ ಬಿನ್ ರಾಜಪ್ಪ (ABATED) |

**<u>ದೋಷಾರೋಪಣೆ</u>**

**ಶ್ರೀಮತಿ ಮಹಾಲಕ್ಷ್ಮೀ ಜಿ 2**ನೇ ಹೆಚ್ಚುವರಿ ಸಿವಿಲ್.ನ್ಯಾ.ದಂಡಾಧಿಕಾರಿ, ಚನ್ನಗಿರಿ ಈ ಮೂಲಕ ನಿಮ್ಮ ಮೇಲೆ ಅಪಾಧಿಸುವುದೇನೆಂದರೆ ಆರೋಪಿತರಾದ ನೀವು:-

ಮೊದಲನೆಯದಾಗಿ ದಿಃ 01-06-2022 ರಂದು ಸಂಜೆ 7.45 ಗಂಟೆ ಸಮಯದಲ್ಲಿ ಚನ್ನಗಿರಿ ತಾಲ್ಲೂಕು ಸಂತೆಬೆನ್ನೂರು ಪೊಲೀಸ್ ಠಾಣಾ ವ್ಯಾಪ್ತಿಗೆ ಸೇರಿದ ಕಾಕನೂರು ಗ್ರಾಮದ ಕೆ ಪಿ ಎಂ ಮಹೇಶ್ ರವರ ಕ್ರಷ್ರ್ ಮುಂಭಾಗದಲ್ಲಿ ಹಾದುಹೋಗಿರುವ ಕಾಕನೂರು-ಸಂತೆಬೆನ್ನೂರು ರಸ್ತೆಯ ತಿರುವಿನಲ್ಲಿ ಮೃತ 3 ನೇ ಅರೋಪಿ ಚಾಲನ ಪರವಾನಿಗೆ ಇಲ್ಲದೆ 2 ನೇ ಅರೋಪಿತರ ಮಾಲೀಕತ್ವದ ಕೆಎ-17ಹೆಚ್ ಕೆ 3216 ನೇ ಮೋಟಾರ್ ಬೈಕ್ ನ್ನು ಚಾಲನೆ ಮಾಡಿಕೊಂಡು ಕಾಕನೂರು ಕಡೆಯಿಂದ ಸಂತೆಬೆನ್ನೂರು ಕಡೆಗೆ ಬೈಕ್ ನ್ನು ಚಾಲನೆ ಮಾಡಿಕೊಂಡು ಹೋಗುತ್ತಿದ್ದಾಗ 1ನೇ ಆರೋಪಿಯಾದ ನೀನು ನಿನ್ನ ಬಾಬ್ತು ಕೆಎ-17/ಎಂವಿ-3854 ನೇ ಕಾರಿನಲ್ಲಿ ಚಾಸಾ-7 ರವರನ್ನು ಕರೆದುಕೊಂಡು ಸಂತೆಬೆನ್ನೂರು ಕಡೆಯಿಂದ ಮೇಲ್ಕಂಡ ರಸ್ತೆಯ ಮಾರ್ಗವಾಗಿ ಕಾಕನೂರು ಗ್ರಾಮಕ್ಕೆ ಕಾರನ್ನು ಚಾಲನೆ ಮಾಡಿಕೊಂಡು ಬರುತ್ತಿದ್ದಾಗ ಮೇಲ್ಕಂಡ ರಸ್ತೆಯ ತಿರುವಿನಲ್ಲಿ ಅತೀವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ಯಾವುದೇ ವಾಹನವನ್ನು ಓವರ್ ಟೇಕ್ ಮಾಡಲು ಹೋಗಿದ್ದರಿಂದ ನಿಯಂತ್ರಣ ತಪ್ಪಿದ ಕಾರು ಮೇಲ್ಕಂಡ ಬೈಕಿಗೆ ಡಿಕ್ಕಿಪಡಿಸಿರುತ್ತೀರಿ ಆ ಮೂಲಕ ಭಾ.ದಂ.ಸಂ.ಕಲಂ 279 ರ ಅಡಿಯಲ್ಲಿ ಈ ನ್ಯಾಯಾಲಯದ ಸಂಜ್ಞಾನದೊಳಗೆ ಶಿಕ್ಷಾರ್ಹವಾದ ಅಪರಾಧವನ್ನು ಎಸಗಿರುತ್ತೀರಿ.

ಎರಡನೆಯದಾಗಿ  ಮೇಲೆ ಹೇಳಿದ ಸ್ಥಳ, ಸಮಯ ಮತ್ತು ದಿನಾಂಕದಂದು ಮೇಲ್ಕಂಡ ಕಾರು ನಿಯಂತ್ರಣ ತಪ್ಪಿ 2ನೇ ಆರೋಪಿ ಚಲಾಯಿಸುತ್ತಿದ್ದ ಬೈಕಿಗೆ ಡಿಕ್ಕಿಪಡಿಸಿದ್ದರಿಂದ ಸದರಿಯವರ ತಲೆಗೆ , ಮೈ , ಕೈ ಕಾಲುಗಳಿಗೆ ತೀವ್ರವಾಗಿ ಪೆಟ್ಟು ಬಿದ್ದು ಸ್ಥಳದಲ್ಲಿಯೇ ಮೃತಪಟ್ಟಿರುತ್ತಾರೆ, ಆ ಮೂಲಕ ಭಾ.ದಂ.ಸಂ.ಕಲಂ 304(ಎ) ಅಡಿಯಲ್ಲಿ ಈ ನ್ಯಾಯಾಲಯದ ಸಂಜ್ಞಾನದೊಳಗೆ ಶಿಕ್ಷಾರ್ಹ ಅಪರಾಧವನ್ನು ಎಸಗಿರುತ್ತೀರಿ.

(ಮೇಲೆ ಹೇಳಿದ ಆರೋಪಗಳ ಮೇಲೆ ಈ ನ್ಯಾಯಾಲಯದಲ್ಲಿ ವಿಚಾರಣೆಗೆ ಗುರಿಯಾಗಿರುತ್ತೀರಾ ಎಂದು ನಿರ್ದೇಶಿಸಿದ್ದೇನೆ)

ದಿನಾಂಕ: 24-02-2025

**(ಶ್ರೀಮತಿ ಮಹಾಲಕ್ಷ್ಮೀ ಜಿ )**

**2ನೇ ಹೆಚ್ಚುವರಿ ಪ್ರ.ದ.ನ್ಯಾ ,**
**ದಂಡಾಧಿಕಾರಿ, ಚನ್ನಗಿರಿ.**

**2ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ ಚನ್ನಗಿರಿ,**

**ನ್ಯಾಯಾಲಯದಲ್ಲಿ**

**ಸಿಸಿ ನಂ:18/2023**

1. **ಕರ್ನಾಟಕ ಸರ್ಕಾರ (ಸಂತೇಬೆನ್ನೂರು ಪಿ.ಎಸ್ )**

**ವಿರುದ್ಧ**

ಆಃ1 ಹರೀಶ ಕೆ ಬಿ ಬಿನ್ ಬಸವರಾಜಪ್ಪ
ವಯಸ್ಸುಃ 36 ವರ್ಷ,

ವಾಸ: ಕಾಕನೂರು ಗ್ರಾಮ,
ಚನ್ನಗಿರಿ ತಾಃ ದಾವಣಗೆರೆ ಜಿಲ್ಲೆ

## ಆರೋಪಿಯ ಹೇಳಿಕೆ

1. ಈಗ ಓದಿ ಹೇಳಿದ ನಿನ್ನ ಮೇಲಿನ ಆಪಾದೆನೆಯನ್ನು ಕೇಳಿದ್ದಿಯಾ? ತಿಳಿಯಿತೇ?

ಉತ್ತರಃ

2. ಸದರಿ ಆಪಾದನೆಯನ್ನು ಒಪ್ಪಿಕೊಳ್ಳುವಿರೋ? ಅಥವಾ ವಿಚಾರಣೆಯಾಗಬೇಕೋ?

ಉತ್ತರಃ

(ಆರೋಪಿತಳಿಗೆ ಆರೋಪಣೆಯ ಸಾರಾಂಶವನ್ನು ದಿನಾಂಕಃ 24-02-2025 ರಂದು ತೆರೆದ ನ್ಯಾಯಾಲಯದಲ್ಲಿ ಓದಿ ಕೇಳಿ ಅವನುಃಳು ಕೊಟ್ಟ ಉತ್ತರವನ್ನು ಬರೆದುಕೊಳ್ಳಲಾಯಿತು.)

ದಿನಾಂಕ: 24-02-2025

**(ಶ್ರೀಮತಿ ಮಹಾಲಕ್ಷ್ಮೀ ಜಿ )**
**2ನೇ ಹೆಚ್ಚುವರಿ ಪ್ರ.ದ.ನ್ಯಾ ,**
**ದಂಡಾಧಿಕಾರಿ, ಚನ್ನಗಿರಿ.**